ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

1889ನೇ ಇಸವಿ ಅರ್ಜೀ ನಂಬರ್ 190.

ಮೃತಪಟ್ಟ ಚವ್ವಡನಾಯಕರ ಆಸ್ತೀ ವಿಷಯದಲ್ಲಿ—

ಅರ್ಜಿದಾರಳು ಲಕ್ಷ್ಮಕ್ಕಮ್ಮನು, ಮೃತಪಟ್ಟ ಸದರೀ ಚವ್ವಡನಾಯಕರಿಗೆ ಕೂಡವಳಿ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ತಾ॥ ಆನಂದೂರು ಹೋಬಳಿ ರಾಮನಹಳ್ಳಿ ಸ್ಥಳದ ಸದರೀ ಲಕ್ಷ್ಮಕ್ಕಮ್ಮನು ಸದರೀ ವಾಸಸ್ಥರಾಗಿ ಮೃತಪಟ್ಟ ಚವ್ವಡನಾಯಕರ ಜೆಂದಗಿ ಬಗ್ಯಾಗಿ ಬರತಕ್ಕ 2,000 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಲಕ್ಷ್ಮಕ್ಕಮ್ಮನವರ ಅರ್ಜಿಯನ್ನು 1889ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 16ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶಿ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚವ್ವಡನಾಯಕರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1889ನೇ ಇಸವಿ ಅರ್ಜೀ ನಂಬರ್ 192.

ಮೃತಪಟ್ಟ ಜವಳಿ ಅಂಗಡಿ ಚಿಕ್ಕ ಲಿಂಗಣ್ಣನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಬೋಗಯ್ಯನವರು, ಮೃತಪಟ್ಟ ಸದರೀ ಚಿಕ್ಕ ಲಿಂಗಣ್ಣನವರಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಮಂಡಿ ಮೊಹಲಾ ಸ್ಥಳದ ಸದರೀ ಬೋಗಯ್ಯನವರು, ಸದರೀ ವಾಸಸ್ಥರಾಗಿ ಮೃತಪಟ್ಟ ಚಿಕ್ಕ ಲಿಂಗಣ್ಣನವರ ಜೆಂದಗಿ ಬಗ್ಯಾಗಿ ಬರತಕ್ಕ 2,000 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಬೋಗಯ್ಯನವರ ಅರ್ಜಿಯನ್ನು 1889ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 16ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚಿಕ್ಕ ಲಿಂಗಣ್ಣವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1889ನೇ ಇಸವಿ ಆಗಸ್ಟ್ ತಿಂಗಳು 14ನೇ ತಾರೀಖಿನಲ್ಲಿ ಕೋರ್ಟು ಮೊಹರಿನು ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಎಸ್. ಹೇಮಾಜಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಮೈಸೂರು ಸಬ್ ಜಡ್ಜಿಯವರ ಕೋರ್ಟಿನಲ್ಲಿ.

ದಿವಾಳಿಯಾದ ಡಿಕ್ರೀ ದೇಣೇದಾರ ಯಡತೊರೆ ತಾಲ್ಲೂಕು ವಿಲೇಯಲ್ಲಿ ಇರುವ ದಾಸಖಣಿಜಿಗರ ಮುದ್ದವೀರ ಕಟ್ಟವುಗ ಕರಿಕಟ್ಟ ಯಂಬವನ ವಿಷಯದಲ್ಲಿ—

ಸನ 1889ನೇ ಇಸವಿ ದಿವಾಳಿ ಕೇಸ್ ನಂಬರ್ 4.

ಹುಕುಂ.

ಮೇಲ್ಕಂಡ ಕರಿಕಟ್ಟ ಯಂಬವನು ನಿರ್ಬಂಧದಿಂದ ಖುಲಾಸೇಯಾಗಬೆಕೆಂದು ಕೊಟ್ಟ ಅರ್ಜೀ ಅಂಕವು ಈ ಕೋರ್ಟು ರೂಬರೂ ಅರ್ಜಿದಾರನಾದ ಕರಿಕಟ್ಟ ಪರವಾಗಿ ಫಸ್ಟ್ ಗ್ರೇಡ್ ಪ್ಲೀಡರ್ ನಾರಾಯಣರಾಯರನ್ನು ಮತ್ತು ಸದರೀಯವನ ಲೇಣೇದಾರ್ರಾದ 1ನೇ ಬಂದ ಪಳ್ಳಿ ತಿದ್ದಾ 2ನೇ ಕೊನ್ನಾರಕಟ್ಟ 4ನೇ ಲಕ್ಷ್ಮಕ್ಕಯ್ಯನ ಕಡೆ ಫಸ್ಟ್ ಗ್ರೇಡ್ ಪ್ಲೀಡರ್ ಸುಬ್ಬರಾಯರಿಗೂ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರು, ತಮಗೆ ಈ ದರ್ಯಾಫ್ತೀ ನೋಟೀಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಆಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆತಪ್ಪಿಹೋದರು ಯಾರೆಂದರೆ—3ನೇ ಬೋಲೇಗೌಡ 5ನೇ ಲಕ್ಕೇಗೌಡ 6ನೇ ಕಾಳಿ 7ನೇ ತಿಮ್ಮಯ್ಯ.

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲಾನ್ನ ಸದರೀ ಕರಿಕಟ್ಟ ಯಂಬವನು ಹೊಂದುವದಕ್ಕೆ ಹಕ್ಕುದಾರನಾಗುವವರ ಮೂಲಕ ದಿವಾಳಿಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತೆಯಾಗಿ ಸದರೀ ದಿವಾಳಿಯಾದವನನ್ನ ನಿರ್ಬಂಧದಿಂದ ವಿಮೋಚನೆ ಮಾಡಿರುವದಲ್ಲದೆ ಇದಕ್ಕೆ ಲಗ್ಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ವತ್ತರವಾಗಿಯಾಗಲಿ ದಸ್ತಗಿರೀ ಮಾಪಲ್ಪಟ್ಟು ನಿರ್ಬಂಧಪಡುವ ಜವಾಬ್ದಾರೀಯಿಂದ ಸಹ ಅವನನ್ನ ನಿಖಾಲಸು ಮಾಡಲಾಗಿರುತ್ತೆ ಯೆಂದು ಇದರಿಂದ ಹುಕುಂ ಮಾಪಲ್ಪಟ್ಟಿರುತ್ತೆ.

ಸನ 1889ನೇ ಇಸವಿ ಆಗಸ್ಟ್ 7ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮದಸ್ತಖತ್‌ನಿನಿ ಕೊಡಲ್ಪಟ್ಟಿತು.